ಸಿ.ಸಿ ನಂ-1022/2018
ಚಾಸಾ-3 ಪ್ರಾಸಾ-3

ದಿನಾಂಕಃ **23-04-2024** ರಂದು ಸಾಕ್ಷಿಯನ್ನು ಕರೆದು ಪ್ರಮಾಣ ವಚನ ಬೋಧಿಸಲಾಯಿತು**.**

ಪಾಟೀ ಸವಾಲು ಃ ಆರೋಪಿ ಪರ ವಕೀಲರಿಂದಃ

ಚಾಸಾ-1 ಅವರು ನನಗೆ ಮೊದಲಿನಿಂದಲೂ ಪರಿಚಯ ಎಂದರೆ ಸರಿ. ಚಾಸಾ-1 ಅವರ ಕಳ್ಳತನವಾಗಿದ್ದರ ಕುರಿತು ಪಂಚನಾಮೆ ಜರುಗಿಸುವ ಕಾಲಕ್ಕೆ ನಾನು ಹಾಜರು ಇದ್ದು, ಸಹಿ ಮಾಡಿರುತ್ತೇನೆ. ಪಂಚನಾಮೆಯನ್ನು ನಾನು ಓದಿ , ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ಸದರಿ ಪ್ರಕರಣದಲ್ಲಿ ನನ್ನ ಸಮಕ್ಷಮ ಎಂಟೂವರೆ ತೊಲೆ ಬಂಗಾರದ ಆಭರಣ ಮತ್ತು 1 ಲಕ್ಷ ರೂ. ನಗದು ಹಣ ಜಪ್ತು ಪಡಿಸಿಕೊಂಡಿರುತ್ತಾರೆ. ನನ್ನ ಸಮಕ್ಷಮ ಯಾವುದೇ ಆಭರಣ ಮತ್ತು ಹಣ ಜಪ್ತು ಪಡಿಸಿಕೊಂಡಿಲ್ಲ, ಚಾಸಾ-1 ಅವರು ನನಗೆ ಪರಿಚಯಸ್ಥರು ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿ.

ಮರು ವಿಚಾರಣೆ ಇಲ್ಲ**.**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ.

Sd/-
ಹೆಚ್ಚುವರಿ ಜೆಎಂಎಫ್‌ಸಿ ಮುಧೋಳ.

ಸಾಕ್ಷಿಯ ಸಹಿ

ಸಿ.ಸಿ ನಂ-1022/2018
ಚಾಸಾ- 2 ಪ್ರಾಸಾ-2

ದಿನಾಂಕಃ **23-04-2024** ರಂದು ಸಾಕ್ಷಿಯನ್ನು ಕರೆದು ಪ್ರಮಾಣ ವಚನ ಬೋಧಿಸಲಾಯಿತು**.**

ಪಾಟೀ ಸವಾಲು ಃ ಆರೋಪಿ ಪರ ವಕೀಲರಿಂದಃ

ಚಾಸಾ-1 ಅವರು ನನಗೆ ಮೊದಲಿನಿಂದಲೂ ಪರಿಚಯ ಎಂದರೆ ಸರಿ. ಸದರಿ ಪ್ರಕರದಲ್ಲಿ ನನ್ನ ಸಮಕ್ಷಮ ಏನು ಜಪ್ತಿ ಮಾಡಿದ್ದಾರೆ ಎಂದು ನನಗೆ ವೈಯಕ್ತಿಕವಾಗಿ ಮಾಹಿತಿ ಇಲ್ಲ ಎಂದರೆ ಸರಿಯಲ್ಲ.

ನಿಪಿ-2 ರಲ್ಲಿನ ಸಂಗತಿ ನನಗೆ ಗೊತ್ತಿಲ್ಲ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಯಾವುದೇ ಮು.ಮಾ ಗಳನ್ನು ಜಪ್ತು ಪಡಿಸಿಕೊಂಡಿಲ್ಲ ಮತ್ತು ಯಾವುದೇ ಪಂಚನಾಮೆ ಜರುಗಿಸಿಲ್ಲ, ಚಾಸಾ-1 ನನಗೆ ಪರಿಚಯಸ್ಥರು ಎಂದು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿ.

ಮರು ವಿಚಾರಣೆ ಇಲ್ಲ**.**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ.

Sd/-
ಹೆಚ್ಚುವರಿ ಜೆಎಂಎಫ್‌ಸಿ ಮುಧೋಳ.

ಸಾಕ್ಷಿಯ ಸಹಿ